ಶ್ರೀ ಪುರುಶೋತ್ತಮ ಸಿ. ಕಾಮತ (ಮಂಗೇಶ)
ಅಧ್ಯಕ್ಷರು,

ಆಫಿಸ್ : 08383-250100
ಮೊಬೈಲ್ : 9480356406

# ಗ್ರಾಮ ಪಂಚಾಯತ ಕಾತೇಲಿ (ಕುಂಬಾರವಾಡ)

ಪಿನ್ : 581 187, ಪೋಸ್ಟ : ಕುಂಬಾರವಾಡ,
ತಾ|| ಜೋಯಿಡಾ, ಜಿ|| ಕಾರವಾರ

ಉಲ್ಲೇಖ,ಸಂಖ್ಯೆ :

ದಿನಾಂಕ :

ಶ್ರೀ ಬಿ.ಎಸ್.ಯಡಿಯೂರಪ್ಪ ಮಾನ್ಯ ಮಂತ್ರಿಗಳು,
ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರ

ವಿಷಯ: ಗ್ರಾಮ ಪಂಚಾಯತ್ಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ.

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ರ ಪರಿಣಾಮ ಕರ್ನಾಟಕದ ಮೇಲು ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ, ಕಾರ್ನಾಟಕದಲ್ಲಿ ಇದೇ ಮೇ ತಿಂಗಳ ಅಂತ್ಯದೊಳಗೆ ನಡೆಯಬೇಕಿದ್ದ ಗ್ರಾಮ ಪಂಚಾಯತ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್ 19-ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇಸರಿ. ಕಾರಣ ಜೋಯಿಡಾ ತಾಲೂಕಿನಲ್ಲಿ ಕಾತೇಲಿ ಗ್ರಾಮಪಂಚಾಯತ ಬರುತ್ತೀದ್ದು, ಈ ಗ್ರಾಮ ಪಂಚಾಯತ ಗಡಿ ಭಾಗದಲ್ಲಿ ಗೋವಾ ಹಾಗೂ ಮಹಾರಾಷ್ಟ್ರ ಬರುತ್ತಿದ್ದು, ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 6 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್ಯಾವುದೇ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರೂ ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದಲ್ಲ. ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ. ಸಾರ್ಕಾರದ ರಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವೂ ಬಹಳ ಪ್ರಮುಖವಾದದ್ದು. ಗ್ರಾಮ ಪಂಚಾಯತ ಒಂದು ಸ್ಥಳಿಯ ಸ್ವಯಂ ಸರ್ಕಾರ. ಹಿಗಾಗಿಯೇ ಇಡೀ ರಾಜ್ಯದಾದ್ಯಂತ ಕೋವಿಡ್-19 ರ ಪರಿಸ್ಥಿತಿ ಘೋಷಣೆಯ ಆದಾಗ ಮೊಟ್ಟಮೊದಲು ಸರ್ಕಾರ ಮಾಡಿದ ಕೆಲಸವೆಂದರೆ ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಯಿಸುವ ಎಲ್ಲಾ ಇಲಾಖೆಗಳ ಸ್ವಯಂಸೇವಾ ಸಂಸ್ಥೆಗಳ ಸ್ವಯಂಸೇವಕರ ಸಂಯೋಜನೆಯಲ್ಲಿ ಜಾರಿ ಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್‌ನ ವಿಕೋಪ ನಿರ್ವಹಣೆಯ ಜವಾಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು, ಚುನಾಯಿತ ಪ್ರತಿನಿಧಿಗಳಾದ ನಾವುಪಂಚಾಯತ್ ಆಡಳಿತದಲ್ಲಿ ಸಕ್ರೀಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮಪಂಚಾಯತ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ ಜವಾಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನೂ ಸಹ ನಿಭಾಯಿಸಲು ಸ್ಥಳಿಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಹಾಗೂ ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ ಸವಾಲುಗಳೇನು ಎಂಬುದನ್ನು ಕೂಲಂಕುಶವಾಗಿ ಗಮನಿಸಿದ್ದೇವೆ. ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ ಇರುವ ಈ ಸಮಯದಲ್ಲಿ ನಾವು ಸ್ಥಳಿಯ ಸರ್ಕಾರದ ಅವಿಭಾಜ್ಯ ಅಂಗವಾಗಿ, ವಿಕೋಪವನ್ನು ಸಮರ್ಥಕವಾಗಿ ನಿಭಾಯಿಸುವಲ್ಲಿ ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ

Scanned with CamScanner

ಕಾರ್ಯನೀರ್ವಹಿಸಿರುತ್ತೇನೆ. ಚುನಾಯಿತ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೇ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನು ಮುಂದುವರಿಯುತ್ತೀರುವ ಈ ಸವಾಲಿನ ಸಮಯದಲ್ಲಿ ಪಂಚಾಯತ ಆಡಳಿತಕ್ಕೆ ಕೇವಲ ಆಡಳಿತಾಧೀಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಂಜಸವಾದುದು. ತಮ್ಮ ಸರ್ಕಾರದ ಈ ಆಲೋಚನೆ, ನಿರ್ಧಾರವನ್ನು ತಕ್ಷಣವೇ ಕೈಬಿಟ್ಟು, ಪ್ರಸ್ತುತ ಇರುವ ಚುನಾಯಿತ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳಿಯ ಸರ್ಕಾರವನ್ನೇ ಮಧ್ಯಂತರ ಸ್ಥಳಿಯ ಸ್ವಯಂ ಸರ್ಕಾರವಾಗಿ ಮುಂದುವರಿಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತ್‌ನ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತಿದ್ದೇವೆ. ಇದೇ ಪಂಚಾಯತ್‌ನ ಜನರಿಂದ ಚುನಾಯಿತರಾದ ನಾವು ಸ್ಥಳಿಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ. ಹಾಗೂ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಸಾರ್ವಜನಿಕರಿಗೆ ಕೋವಿಡ್–19 ಸಾಂಕ್ರಾಮಿಕ ಮಹಾಮಾರಿ ಕಾರಣ ದಿಂದ ಆಗುವ ತೊಂದರೆಗಳಿಗೆ ಇನ್ನು ಹೆಚ್ಚಿನ ಪ್ರಮಾಣದಲ್ಲಿ ಸಹಾಯ ಮಾಡಲು ಅನುಕೂಲ ಮಾಡಿಕೋಡಬೇಕಾಗಿ ತಮ್ಮಲ್ಲಿ ವಿನಂತಿ.

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು, ಹಾಗೂ ಸರ್ವ ಸದಸ್ಯರು ಕಾತೇಲಿ ಗ್ರಾಮ ಪಂಚಾಯತ ಜೋಯಿಡಾ ತಾಲೂಕು, ಉತ್ತರ ಕನ್ನಡ ಜಿಲ್ಲೆ.

ಅಧ್ಯಕ್ಷರು
ಗ್ರಾ. ಪಂಚಾಯತ ಕಾತೇ
(ಕುಂಭಾರವಾಡ)
ಜೋಯಿಡಾ (ಉ.ಕ.)

ಸ್ಥಳ : ಕಾತೇಲಿ(ಕುಂಭಾರವಾಡಾ)
ದಿನಾಂಕ : 08/05/2020

ಯಥಾ ಪ್ರತಿ :

- ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ.
- ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳುಮ ಕರ್ನಾಟಕ ಸರ್ಕಾರ
- ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ದಿ ಮತ್ತು ಪಂಚಾಯತ ರಾಜ್ ಇಲಾಖೆ. ಕರ್ನಾಟಕ ಸರ್ಕಾರ
- ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ, ಕರ್ನಾಟಕ.

Scanned with CamScanner